ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

# ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಯ ಮೂಲಕ ಮಹಿಳೆಯರಿಗೂ ಸಮಾನ ಅಧಿಕಾರ




ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ಸ್ವಚ್ಛ ಭಾರತ್ ಮಿಷನ್, ಜಲಜೀವನ್ ಯೋಜನೆಗಳ ಯಶಸ್ವಿ ಅನುಷ್ಠಾನದ ಮೂಲಕ ಗ್ರಾಮಗಳ ಅಭಿವೃದ್ಧಿ, ಶುದ್ಧ, ಸುರಕ್ಷಿತ ಕುಡಿಯುವ ನೀರಿನ ಪೂರೈಕೆ ಹಾಗೂ ದೃಶ್ಯ ಸ್ವಚ್ಛತೆಯನ್ನು ಸಾಧಿಸುವಲ್ಲಿ, ಗ್ರಾಮೀಣ ಜನರ ಜೀವನಮಟ್ಟ ಸುಧಾರಿಸುವಲ್ಲಿ ಯಶಸ್ಸು ಕಂಡಿದೆ. ಅದರಲ್ಲೂ ಗ್ರಾಮೀಣ ಮಹಿಳೆಯನ್ನು ಇಲಾಖೆಯ ವಿವಿಧ ಯೋಜನೆಗಳಲ್ಲಿ ತೊಡಗಿಸಿಕೊಳ್ಳುವ ಮೂಲಕ, ಮಹಿಳೆಯರಿಗೆ ವಿಶೇಷ ಅಧಿಕಾರ ನೀಡುವ ಮೂಲಕ ಮಹಿಳಾ ಸಬಲೀಕರಣಕ್ಕೆ ಉತ್ತೇಜನ ನೀಡಲಾಗುತ್ತಿದೆ.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ಮಹಿಳಾ ಸಬಲೀಕರಣಕ್ಕೆ ವಿಶೇಷ ಒತ್ತು ನೀಡುತ್ತಿರುವುದು ಗಮನಾರ್ಹ ಸಂಗತಿ. ಸ್ವಚ್ಛ ಭಾರತ್ ಮಿಷನ್(ಗ್ರಾ), ಜಲಜೀವನ್ ಮಿಷನ್ ಯೋಜನೆಯ ಮೂಲಕ ಸ್ಥಳೀಯ ಮಟ್ಟದಲ್ಲಿಯೇ ಮಹಿಳೆಯರಿಗೆ ಉದ್ಯೋಗ ಸೃಷ್ಟಿಸಲಾಗುತ್ತಿದೆ. ಇದು ಮಹಿಳೆಯರನ್ನು ಆರ್ಥಿಕವಾಗಿ ಸದೃಢಗೊಳಿಸಿ ಅವರ ಜೀವನಮಟ್ಟವನ್ನು ಸುಧಾರಿಸಿದೆ. ಇದಷ್ಟೇ ಅಲ್ಲದೇ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಯಲ್ಲಿ ಮಹಿಳೆಯರಿಗೆ ವಿಶೇಷ ಅಧಿಕಾರವನ್ನು ನೀಡುವ ಮೂಲಕ ಮಹಿಳೆಯ ಸರ್ವತೋಮುಖ ಅಭಿವೃದ್ಧಿಗೆ ಉತ್ತೇಜನ ಸಿಕ್ಕಿದಂತಾಗಿದೆ.

ಗ್ರಾಮಗಳಲ್ಲಿ ನೀರು ಸರಬರಾಜು ವ್ಯವಸ್ಥೆ, ಸ್ವಚ್ಛತೆ ಹಾಗೂ ನೈರ್ಮಲ್ಯ ಯೋಜನೆಗಳ ಅನುಷ್ಠಾನಕ್ಕಾಗಿ ಗ್ರಾಮ ಪಂಚಾಯಿತಿಗೆ ನೆರವಾಗುವ ಉದ್ದೇಶದಿಂದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಡಿ ಪ್ರತಿ ಗ್ರಾ.ಪಂ ವ್ಯಾಪ್ತಿಯಲ್ಲಿ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ (VWSC) ಯನ್ನು ರಚಿಸಲಾಗುತ್ತದೆ. ವಿಶೇಷವಾಗಿ ಈ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಯಲ್ಲಿ ಮಹಿಳೆಯರಿಗೆ ಸಮಾನ ಅಧಿಕಾರವನ್ನು ನೀಡಲಾಗಿದೆ.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ಮಹಿಳಾ ಸಬಲೀಕರಣಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಯಲ್ಲಿ **ಶೇ. 50ರಷ್ಟು** ಮಹಿಳಾ ಸದಸ್ಯರಿಗೆ ಅಧಿಕಾರ ನೀಡಿದೆ. ಅದರಲ್ಲೂ ಕೆಲವು ಗ್ರಾಮ ಪಂಚಾಯಿತಿಗಳ VWSC ಸಮಿತಿಯಲ್ಲಿ **ಶೇ. 100ರಷ್ಟು** ಮಹಿಳಾ ಸದಸ್ಯರೇ ಇರುವುದು ಇಲಾಖೆಯು ಮಹಿಳಾ ಕಲ್ಯಾಣಕ್ಕೆ ವಿಶೇಷ ಪ್ರಾಶಸ್ತ್ಯ ನೀಡುತ್ತಿರುವುದಕ್ಕೆ ಉತ್ತಮ ನಿದರ್ಶನ. ಅಷ್ಟೇ ಅಲ್ಲ, ಮಹಿಳೆಯರು ತಮಗೆ ಸಿಕ್ಕಿರುವ ಅವಕಾಶಗಳನ್ನು ಉತ್ತಮವಾಗಿ ಬಳಸಿಕೊಂಡು ಸ್ವಾವಲಂಬಿಗಳಾಗಿ ಬದುಕು ನಡೆಸುತ್ತಿದ್ದಾರೆ.

ವಿಶೇಷವಾಗಿ **2025 ಜನವರಿ 26ರಂದು ದೆಹಲಿಯಲ್ಲಿ ನಡೆದ ಗಣರಾಜ್ಯೋತ್ಸವ ದಿನಾಚರಣೆ** ಕಾರ್ಯಕ್ರಮದಲ್ಲಿ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಯ ಮೂವರು ಸದಸ್ಯರು ಭಾಗವಹಿಸಿದ್ದರು. **ಬೀದರ್ ಜಿಲ್ಲೆಯ ಕಪ್ಲಾಪುರ (ಎ) ಗ್ರಾಮ ಪಂಚಾಯಿತಿಯಿಂದ ಶ್ರೀಮತಿ ಸರಸ್ವತಿ, ಕೊಪ್ಪಳ ಜಿಲ್ಲೆಯ ಕೋಳೂರು ಗ್ರಾಮ ಪಂಚಾಯಿತಿಯಿಂದ ಶ್ರೀಮತಿ ಶಿವಮ್ಮ ಜಿ. ಪೂಜಾರ್, ಚಿತ್ರದುರ್ಗ ಜಿಲ್ಲೆಯ ರಾಂಪುರ ಗ್ರಾಮ ಪಂಚಾಯಿತಿಯಿಂದ ಶ್ರೀಮತಿ ಅನಂತಮ್ಮ** ಅವರನ್ನು ಆಯ್ಕೆ ಮಾಡಿ ದೆಹಲಿಗೆ ಕಳುಹಿಸಲಾಗಿತ್ತು.

***ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಯ ಸದಸ್ಯರಾಗಿ ಈ ಮೂವರು ರಾಜ್ಯವನ್ನು ಪ್ರತಿನಿಧಿಸಿ ದೆಹಲಿಯಲ್ಲಿ ನಡೆದ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಹರ್ಷ ವ್ಯಕ್ತಪಡಿಸಿದರು.***



ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ಮಹಿಳಾ ಸಬಲೀಕರಣಕ್ಕೆ ವಿಶೇಷ ಒತ್ತು ನೀಡುತ್ತಿದ್ದು, ಗ್ರಾಮೀಣ ಮಹಿಳೆಯರನ್ನು ಮುನ್ನೆಲೆಗೆ ತರುತ್ತಿದೆ. ನಾನು VWSC ಸಮಿತಿಯ ಸದಸ್ಯೆಯಾಗಿ ದೆಹಲಿಯಲ್ಲಿ ನಡೆದ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲು ಅವಕಾಶ ಸಿಕ್ಕಿರುವುದು ತುಂಬಾ ಖುಷಿ ಕೊಟ್ಟಿದೆ. ಇದು ನಮಗೆ ಕರ್ತವ್ಯ ನಿರ್ವಹಿಸಲು ಇನ್ನಷ್ಟು ಸ್ಫೂರ್ತಿ ನೀಡಿದೆ.

**- ಶ್ರೀಮತಿ ಸರಸ್ವತಿ,**
ಕಪ್ಲಾಪುರ (ಎ) ಗ್ರಾ.ಪಂ, ಬೀದರ್



ರಾಷ್ಟ್ರ ರಾಜಧಾನಿಯಲ್ಲಿ ನಡೆಯುವ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ನಾನು ಭಾಗವಹಿಸುತ್ತೇನೆ ಎಂದು ಕನಸಿನಲ್ಲಿಯೂ ಊಹಿಸಿರಲಿಲ್ಲ. ಆದ್ರೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಅದು ಸಾಧ್ಯವಾಗಿದೆ. ಇಲಾಖೆಯು ನೀಡಿದ ಅವಕಾಶಗಳನ್ನು ಸದಪಯೋಗಪಡಿಸಿಕೊಂಡು ತೃಪ್ತಿಕರ ಜೀವನ ನಡೆಸುತ್ತಿದ್ದೇನೆ.

**- ಶ್ರೀಮತಿ ಶಿವಮ್ಮ ಜಿ. ಪೂಜಾರ್**
ಕೋಳೂರು ಗ್ರಾ.ಪಂ, ಕೊಪ್ಪಳ



ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದು ನನ್ನ ಜೀವನದ ಅವಿಸ್ಮರಣೀಯ ಕ್ಷಣವಾಗಿದೆ. ಈ ಬಗ್ಗೆ ಹೆಮ್ಮೆ ಅನಿಸುತ್ತಿದೆ. VWSC ಸಮಿತಿಯ ಸದಸ್ಯೆಯಾಗಿ ನನ್ನ ಸೇವೆಯನ್ನು ಹೀಗೆ ಮುಂದುವರೆಸುತ್ತೇನೆ.

**- ಶ್ರೀಮತಿ ಅನಂತಮ್ಮ,**
ರಾಂಪುರ ಗ್ರಾ.ಪಂ, ಚಿತ್ರದುರ್ಗ